ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 05/04/201

# ಮೋದಿಗೆ ಪರಾಕು–ಗೌರ್ನರ್ ಕಲ್ಯಾಣ್‌ಗೆ ಪದಚ್ಯುತಿ ಭೀತಿ

- ಇತಿಹಾಸದಲ್ಲೇ ಮೊದಲ ಪ್ರಕರಣ
- ನೀತಿಸಂಹಿತೆ ಉಲ್ಲಂಘನೆ ಸಾಬೀತು

ನವದೆಹಲಿ: ಲೋಕಸಭಾ ಚುನಾವಣೆ ಸಂದರ್ಭದಲ್ಲೇ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹೊಗಳಿದ್ದ ರಾಜಸ್ಥಾನ ರಾಜ್ಯಪಾಲ ಕಲ್ಯಾಣ್ ಸಿಂಗ್ ಈಗ ಸಂಕಷ್ಟದಲ್ಲಿ ಸಿಲುಕಿದ್ದಾರೆ. ನೀತಿ ಸಂಹಿತೆ ಉಲ್ಲಂಘನೆ ಮಾಡಿರುವ ಹಿನ್ನೆಲೆಯಲ್ಲಿ ಕ್ರಮಕ್ಕೆ ಒಳಗಾಗುವ ಸಾಧ್ಯತೆ ಇದೆ.

ಕಲ್ಯಾಣ್ ಸಿಂಗ್ ಅವರು ತಮ್ಮ ಸಾಂವಿಧಾನಿಕ ಹುದ್ದೆಯ ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾರೆ ಎಂದು ಚುನಾವಣಾ ಆಯೋಗ ಉಲ್ಲೇಖಿಸಿ ರಾಷ್ಟ್ರಪತಿಗೆ ಪತ್ರ ಬರೆದಿತ್ತು. ಈಗ 'ಅಗತ್ಯ ಕ್ರಮ' 'ತೆಗೆದುಕೊಳ್ಳುವ ಸಲುವಾಗಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಕೇಂದ್ರ ಸರ್ಕಾರಕ್ಕೆ ಪತ್ರ ರವಾನಿಸಿದ್ದಾರೆ.

ಪ್ರಧಾನಿ ಪರ ಪ್ರಚಾರ ಮಾಡುವ ಮೂಲಕ ನೀತಿ ಸಂಹಿತೆಯನ್ನು ರಾಜ್ಯಪಾಲರೊಬ್ಬರು ಉಲ್ಲಂಘನೆ ಮಾಡಿರುವುದು ದೇಶದಇತಿಹಾದಲ್ಲೇ ಮೊದಲ ಬಾರಿ. ಸಕ್ರಿಯ ರಾಜಕಾರಣದಿಂದ ರಾಜ್ಯಪಾಲರುಗಳು ದೂರವೇ ಇರಬೇಕು ಎಂದು ರಾಷ್ಟ್ರಪತಿ ಅವರು ಗೃಹ ಸಚಿವಾಲಯಕ್ಕೆ ಬರೆದಿರುವ ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ.

ರಾಜ್ಯಪಾಲರನ್ನು ಚುನಾವಣಾ ಪ್ರಕ್ರಿಯ ಸಂದರ್ಭದಲ್ಲಿ ಪದಚ್ಯುತಗೊಳಿಸಬಹುದೆ ಎನ್ನುವ ಬಗ್ಗೆ ಪ್ರಧಾನಿ ನಿರ್ಧಾರ ತೆಗೆದುಕೊಳ್ಳಬೇಕಾಗುತ್ತದೆ ಎಂದು ಮೂಲಗಳ ತಿಳಿಸಿವೆ. ಕಳೆದ ತಿಂಗಳು ಅಲಿಗಢದಲ್ಲಿ ಮಾತನಾಡಿದ್ದ ಕಲ್ಯಾಣ್ ಸಿಂಗ್, ದೇಶದ ಒಳಿತಿಗಾಗಿ ನರೇಂದ್ರ ಮೋದಿ ಅವರ ಮರು ಆಯ್ಕೆ ಅಗತ್ಯವಾಗಿದೆ ಮತ್ತು ಅದಕ್ಕಾಗಿ ಪಕ್ಷದ ಪ್ರತಿಯೊಬ್ಬ ಸದಸ್ಯರೂ ಶ್ರಮಿಸಬೇಕು ಎಂದಿದ್ದರು.